ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತಮೂರನೆಯ ಅಧಿವೇಶನ

ಗುರುವಾರ, ದಿನಾಂಕ: 4ನೇ ಫೆಬ್ರುವರಿ, 2021

ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಅನುದಾನ ಕುರಿತು

ಶ್ರೀಮತಿ ಎಸ್.ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):-

399 (457) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡೆ ಹಾಗೂ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ 2018-19 ಹಾಗೂ 2019-20ನೇ ಸಾಲಿನ ಮಾನ್ಯ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯ ಎಲ್ಲಾ ಕಂತುಗಳ ಅನುದಾನ ಬಿಡುಗಡೆಯಾಗಿದೆಯೇ;

(ಆ) ಬಂದಿದ್ದಲ್ಲಿ, 2018-19, 2019-20ನೇ ಸಾಲಿನಲ್ಲಿ ಪ್ರತಿಯೊಬ್ಬ ಮಾನ್ಯ ಶಾಸಕರಿಗೆ ಬಿಡುಗಡೆಯಾಗಿರುವ ಅನುದಾನವೆಷ್ಟು; (ವಿವರಗಳನ್ನು ವರ್ಷವಾರು ನೀಡುವುದು)

(ಇ) ಸದರಿ ಸಾಲಿನಲ್ಲಿ 2 ಕೋಟಿ ಮೊತ್ತದ ಕಾಮಗಾರಿಗಳ ಪಟ್ಟಿಯನ್ನು ನೀಡಿರುವ ಎಲ್ಲಾ ಮಾನ್ಯ ಶಾಸಕರುಗಳು ಸೂಚಿಸಿರುವ ಕಾಮಗಾರಿಗಳಿಗೆ ಅನುದಾನ ಒದಗಿಸಲಾಗಿದೆಯೇ; ಇಲ್ಲದಿದ್ದಲ್ಲಿ, ಕಾರಣಗಳೇನು ಹಾಗೂ ಈ ಕುರಿತು ಸರ್ಕಾರ ತೆಗೆದುಕೊಂಡಿರುವ ಕ್ರಮವೇನು;

(ಈ) 2019-20 ನೇ ಸಾಲಿಗೆ ಸಂಬಂಧಿಸಿದಂತೆ ಬಾಕಿ ಇರುವ ಅನುದಾನವನ್ನು ಬಿಡುಗಡೆಗೊಳಿಸಲಾಗುವುದೇ; ಇದ್ದಲ್ಲಿ, ಯಾವ ಕಾಲಮಿತಿಯೊಳಗೆ ಬಿಡುಗಡೆಗೊಳಿಸಲಾಗುವುದು?